# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1504 (1807)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ವಿಷಯ : ರಾಜ್ಯದ ಸಾರಿಗೆ ನಿಗಮಗಳ ಮತ್ತು ಪ್ರತಿ ನಿಗಮದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬಸ್ಸುಗಳು ಹಾಗೂ ಸಿಬ್ಬಂದಿಗಳ ಮಾಹಿತಿ ಕುರಿತು

(ಅ) ರಾಜ್ಯದಲ್ಲಿ ಸಾರಿಗೆ ವ್ಯವಸ್ಥೆಗಾಗಿ ಇರುವ ನಿಗಮಗಳು ಎಷ್ಟು ; ಹಾಗೂ ಪ್ರತಿಯೊಂದು ನಿಗಮದಲ್ಲಿ ಇರುವ ವಾಹನ ಚಾಲಕರ ಹಾಗೂ ನಿರ್ವಾಹಕರ ಸಂಖ್ಯೆ ಎಷ್ಟು ; (ನಿಗಮವಾರು ವಿವರವಾದ ಮಾಹಿತಿ ನೀಡುವುದು)

(ಆ) ಪ್ರತಿ ವಲಯದಲ್ಲಿ ಸಾರಿಗೆ ವ್ಯವಸ್ಥೆಗಾಗಿ ಇರುವ ವಾಹನ (ಬಸ್)ಗಳ ಸಂಖ್ಯೆ ಎಷ್ಟು ; ಪ್ರತಿ ನಿಗಮದ ವ್ಯಾಪ್ತಿಯಲ್ಲಿ ಇನ್ನೂ ಹೆಚ್ಚಿನ ಸಾರಿಗೆ ವ್ಯವಸ್ಥೆ (ಬಸ್ ರೂಟ್) ಪ್ರಾರಂಭಿಸಲು ಸಾರ್ವಜನಿಕರಿಂದ ಹಾಗೂ ಜನ ಪ್ರತಿನಿದಿಗಳಿಂದ ಎಷ್ಟು ಬೇಡಿಕೆ ಬಂದಿವೆ; ಹಾಗಿದ್ದಲ್ಲಿ, ಯಾವ ಯಾವ ನಿಗಮಗಳಲ್ಲಿ ಬಂದಂತಹ ಬೇಡಿಕೆಗಳ ಸಂಖ್ಯೆ ಎಷ್ಟು ; (ಮಾಹಿತಿಯೊಂದಿಗೆ ವಿವರ ನೀಡುವುದು)

(ಇ) ಪ್ರತಿ ನಿಗಮದಲ್ಲಿ ಸಾರಿಗೆ ವ್ಯವಸ್ಥೆಗೆ ಉಪಯುಕ್ತವಾಗಲಾರದ ದುರಸ್ಥಿಗಿರುವ ಬಸ್‌ಗಳ ಸಂಖ್ಯೆ ಎಷ್ಟು ; (ಇದರ ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) 2021-22 ನೇ ಸಾಲಿನ ಕೋವಿಡ್ ಅವಧಿಯಲ್ಲಿ ಮಾರ್ಚ್-20ರಿಂದ ಡಿಸೆಂಬರ್ ವರೆಗೆ ಹತ್ತು ತಿಂಗಳ ನಾಲ್ಕು ಸಾರಿಗೆ ವಲಯಗಳಲ್ಲಿ ಎಷ್ಟು ದಿನಗಳಲ್ಲಿ ಸಾರಿಗೆ ವ್ಯವಸ್ಥೆ ಸಂಪೂರ್ಣ ಸ್ಥಗಿತಗೊಳಿಸಲಾಗಿತ್ತು ; ಸಾರಿಗೆ ವ್ಯವಸ್ಥೆ ಸ್ಥಗಿತವಾದ ಹಿನ್ನಲೆಯಲ್ಲಿ ಪ್ರತಿಯೊಂದು ವಲಯಕ್ಕೆ ಆಗಿರುವ ನಷ್ಟ ಎಷ್ಟು?